ಸಿವಿಲ್ ನ್ಯಾಯಾಧೀಶರು ಮತ್ತು ಹೆ. ಪ್ರದನ್ಯಾದಂ.ರವರ ನ್ಯಾಯಾಲಯ, ತರೀಕೆರೆ.

ಸಿ.ಸಿ.ನಂ.409/2014.

ದಿನಾಂಕಃ18-08-2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಿ.ಡಬ್ಲ್ಯೂಃ3 ಸಿ.ಡಬ್ಲ್ಯೂಃ4

ಸಾಕ್ಷಿಯ ಹೆಸರು ಃ ಕಿರಣ್
ತಂದೆಯ ಹೆಸರು ಃ ರಮೇಶ್
ವಯಸ್ಸು ಃ 32 ವರ್ಷ
ಉದ್ಯೋಗ ಃ ಕೂಲಿ ಕೆಲಸ
ವಾಸ ಃ ಕಡೂರು

**ಮುಖ್ಯ ವಿಚಾರಣೆಃ** ಮಾನ್ಯ ಸ ಸ ಅ ಅವರಿಂದಃ-

1 ಮತ್ತು 3ನೇ ಆರೋಪಿತರು ಈ ದಿನ ಗೈರುಹಾಜರಾಗಿದ್ದು, ಅವರ ಗುರುತಿಸುವಿಕೆಯ ಬಗ್ಗೆ ತಮ್ಮ ತಕರಾರು ಇರುವುದಿಲ್ಲ ಎಂದು ಸದರಿಯವರ ಪರವಾಗಿನ ವಕೀಲರು ತಿಳಿಸಿರುತ್ತಾರೆ.

ಆರೋಪಿತರ ಪರಿಚಯವಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ .

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯು ಸ್ಥಳ ಪಂಚನಾಮೆಯಾಗಿದ್ದು ಅದನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ನಿ ಪಿ 4ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ಸದರಿ ಸಹಿಯನ್ನು ನಾನು ಪೋಲಿಸರ ಕೋರಿಕೆಯ ಮೇರೆಗೆ ಹಾಕಿರುತ್ತೇನೆ. ನಾನು ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ</u> ಮಾನ್ಯ ಸ ಸ ಅ ರವರಿಂದ ಃ-

ದಿನಾಂಕಃ08.03.2014 ರಂದು ಕಡೂರು ಪಟ್ಟಣದ ವಾರ್ಡ್ ನಂ.17 ರ ಮನೆ ನಂ.149 ರಲ್ಲಿ ವಾಸವಿರುವ ನಂಜುಂಡಮ್ಮ ರವರ ಮನೆಯ ಹತ್ತಿರ ಪೊಲೀಸರು ನನ್ನ ಸಮಕ್ಷಮ ನಿಪಿ-4 ರಂತೆ ಪಂಚನಾಮೆ ಮಾಡಿ ಒಂದು ತಾಳಿ ಮತ್ತು ಚಿನ್ನದ ತಂತಿಯನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ದಿ.08.03.2014 ರಂದು ಸದರಿ ಘಟನೆಯ ಕುರಿತು ನಾನು ನನ್ನ ಹೇಳಿಕೆಯನ್ನು ಪೋಲಿಸರಿಗೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ತನ್ನ ಹೇಳಿಕೆಯನ್ನು ಈಗ ಓದಿ ಹೇಳಿದ್ದು ಸಾಕ್ಷಿಯು ತನ್ನ ಹೇಳಿಕೆಯನ್ನು ತಿರಸ್ಕರಿಸಿದ ಮೇರೆಗೆ ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

<u>ಪಾಟೀಸವಾಲುಃ</u> ಆರೋಪಿ ಪರ ವಕೀಲರಿಂದಃ- ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

<u>ಮರು ವಿಚಾರಣೆ ಃ ಇಲ್ಲ</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ,

sd/xxx

(ಸಂತೋಷ್ ಕುಮಾರ್ ಪಿ.ಎಸ್.)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿ, ತರೀಕೆರೆ.